## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ನಿಯೋಜನೆ/ವರ್ಗಾವಣೆ ಮೇಲೆ ಕರ್ತವ್ಯ ನಿರ್ವಹಿಸುತ್ತಿರುವ ಲೋಕೋಪಯೋಗಿ ಇಲಾಖೆ ಹಾಗೂ ಇತರೆ ಇಲಾಖೆಗಳಿಂದ ನೇಮಕಗೊಂಡಿರುವ ಅಧಿಕಾರಿ/ನೌಕರರ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಶಾಶ್ವತವಾಗಿ ವರ್ಗಾವಣೆ ಮೂಲಕ ನೇಮಿಸಿಕೊಳ್ಳಲು ಅಭಿಮತ ನೀಡಲು ಕಾರ್ಯಕಾರಿ ಆದೇಶದ ಮೂಲಕ ಅವಕಾಶ ಕಲ್ಪಿಸುವ ಬಗ್ಗೆ.

******

**ಓದಲಾಗಿದೆ** 1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 139 ಸೇಶಿಕಾ 91, ದಿನಾಂಕ: 24.05.2008
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 47 ಸೇಶಿಕಾ 2014 ದಿನಾಂಕ: 01.09.2014

**ಪ್ರಸ್ತಾವನೆ:–**

ರಾಜ್ಯ ಮತ್ತು ಕೇಂದ್ರ ವಲಯಗಳಡಿ ಹಾಗೂ ವಿದೇಶಿ ನೆರವಿನ ಯೋಜನೆಗಳಡಿ ಕೈಗೊಳ್ಳಲಾಗುವ ರಸ್ತೆ, ಸೇತುವೆ, ಕೆರೆಗಳು, ಕಟ್ಟಡಗಳು ಮತ್ತು ಮಹಾತ್ಮ ಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆ ಮತ್ತಿತರ ಕಾಮಗಾರಿಗಳನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ತಾಂತ್ರಿಕ ಮತ್ತು ಆಡಳಿತಾತ್ಮಕ ಸಿಬ್ಬಂದಿಯು ಕಾಲಮಿತಿಯೊಳಗೆ ಅನುಷ್ಠಾನಗೊಳಿಸಿ ಉತ್ತಮ ಗುಣಮಟ್ಟದಲ್ಲಿ ಪೂರ್ಣಗೊಳಿಸುವ ಜವಾಬ್ದಾರಿ ಹೊಂದಿರುತ್ತದೆ. ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ:24.05.2008ರ ಸರ್ಕಾರದ ಆದೇಶದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರಚಿಸಲಾಗಿದೆ.

ವೃಂದ ಮತ್ತು ನೇಮಕಾತಿ ನಿಯಮಗಳ ನಿಯಮ 2 (2)ರ ಅನುಸಾರ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವಿವಿಧ ವೃಂದಗಳಲ್ಲಿ ಕೆಲಸ ನಿರ್ವಹಿಸುತ್ತಿದ್ದ ಲೋಕೋಪಯೋಗಿ ಇಲಾಖೆಯ ಅಧಿಕಾರಿ/ಸಿಬ್ಬಂದಿ ಹಾಗೂ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಲ್ಲಿ ಕೆಲಸ ನಿರ್ವಹಿಸುತ್ತಿದ್ದ ಅಧಿಕಾರಿ/ನೌಕರರುಗಳು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಯಲ್ಲಿ ಶಾಶ್ವತವಾಗಿ ವಿಲೀನಗೊಳ್ಳಲು ಇಚ್ಛೆ ಹೊಂದಿದ್ದಲ್ಲಿ ಹಿಂಪಡೆಯಲಾಗದ ಅಭಿಮತವನ್ನು ಸದರಿ ನಿಯಮಗಳು ಜಾರಿಗೆ ಬಂದ ದಿನಾಂಕದಿಂದ 3 ತಿಂಗಳ ಒಳಗಾಗಿ ಇಚ್ಛಾ ಪತ್ರಗಳನ್ನು ಸಲ್ಲಿಸಲು ಅವಕಾಶವನ್ನು ಕಲ್ಪಿಸಲಾಗಿತ್ತು. ಅದೇ ರೀತಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ: 01.09.2014ರ ಅಧಿಸೂಚನೆಯಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ನಿಯಮ 2(2)ಕ್ಕೆ ತಿದ್ದುಪಡಿ ಮಾಡಿ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಯಲ್ಲಿ ಶಾಶ್ವತವಾಗಿ ವಿಲೀನಗೊಳ್ಳಲು ಇಚ್ಛೆ ಹೊಂದಿರುವ ಲೋಕೋಪಯೋಗಿ ಇಲಾಖೆಯ ವಿವಿಧ ವೃಂದಗಳ ಅಧಿಕಾರಿ/ನೌಕರರುಗಳಿಗೆ ದಿನಾಂಕ: 01.09.2014 ರಿಂದ 90 ದಿನಗಳೊಳಗಾಗಿ ಅಭಿಮತ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು.

ಮೇಲೆ ತಿಳಿಸಿರುವಂತೆ,ಕಲ್ಪಿಸಿರುವ ಅವಕಾಶದನ್ವಯ, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಯಲ್ಲಿ ಶಾಶ್ವತವಾಗಿ ವಿಲೀನಗೊಳ್ಳಲು ಅಭಿಮತ ಸಲ್ಲಿಸಿದ ವಿವಿಧ ವೃಂದಗಳ ಅಧಿಕಾರಿ/ನೌಕರರುಗಳ ಇಚ್ಛಾಪತ್ರಗಳನ್ನು ಸದರಿಯವರುಗಳ ಮಾತ್ರ

ಇಲಾಖೆಯಾದ ಲೋಕೋಪಯೋಗಿ ಇಲಾಖೆಗೆ ಕಳುಹಿಸಿ ಸಹಮತಿಯನ್ನು ಕೋರಲಾಗಿತ್ತು. ಅದರಂತೆ ಲೋಕೋಪಯೋಗಿ ಇಲಾಖೆಯು ವಿವಿಧ ವೃಂದಗಳ ಒಟ್ಟು-64 ಅಧಿಕಾರಿ/ನೌಕರರುಗಳ ಸೇವೆಯನ್ನು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ವಿಲೀನಗೊಳಿಸಲು ಸಹಮತಿಯನ್ನು ನೀಡಿದ್ದು, ಅದರನ್ವಯ ಈಗಾಗಲೇ ಕ್ರಮವಹಿಸಲಾಗಿದೆ.

ಏತನ್ಮಧ್ಯೆ ಉಪ ಮುಖ್ಯ ಮಂತ್ರಿಗಳು, ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಇಲಾಖೆ ಇವರು ದಿನಾಂಕ: 19.09.2019 ಮತ್ತು 17.12.2019 ರಂದು ಸಭೆ ನಡೆಸಿ ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯಲ್ಲಿ ವಿವಿಧ ವೃಂದಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರುಗಳನ್ನು ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ಹಂಚಿಕೆ ಮಾಡುವುದು ಅವಶ್ಯವಿದ್ದು, ಈ ದೆಸೆಯಲ್ಲಿ ಸಂಬಂಧಪಟ್ಟ ಇಲಾಖೆಯವರು ವಿಲೀನಗೊಳ್ಳಲು ಇಚ್ಛೆ ಹೊಂದಿರುವ ನೌಕರರುಗಳ ಅಭಿಮತಗಳನ್ನು ಹೊಸದಾಗಿ ಪಡೆದು ಸದರಿ ವಿಷಯಕ್ಕೆ ಸಂಬಂಧಿಸಿದಂತೆ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಇವರ ಅಧ್ಯಕ್ಷತೆಯಲ್ಲಿ ರಚಿಸಲಾಗಿರುವ ತಜ್ಞರ ಸಮಿತಿಯ ಮುಂದೆ ಮಂಡಿಸಲು ಕ್ರಮವಹಿಸಬೇಕೆಂದು ನಿರ್ಣಯಿಸಲಾಗಿದೆ.

ಸದರಿ ವಿಷಯಕ್ಕೆ ಸಂಬಂಧಿಸಿದಂತೆ, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಅಧ್ಯಕ್ಷತೆಯಲ್ಲಿ ದಿನಾಂಕ; 25.11.2019 ರಂದು ನಡೆದ ಸಭೆಯಲ್ಲಿ ಲೋಕೋಪಯೋಗಿ ಇಲಾಖೆ, ಜಲಸಂಪನ್ಮೂಲ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳಿಗೆ ವಿವಿಧ ವೃಂದಗಳ ಅಧಿಕಾರಿ/ನೌಕರರುಗಳ ಬೇರ್ಪಡೆ ಸಲುವಾಗಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಹೊಸದಾಗಿ ಅಭಿಮತಗಳನ್ನು ಆನ್‌ಲೈನ್ ಮೂಲಕ ಕರೆಯಲು ಕ್ರಮವಹಿಸಬೇಕೆಂದು, ಈ ಎಲ್ಲಾ ಪ್ರಕ್ರಿಯೆ ಪೂರ್ಣಗೊಳಿಸಿ ತಜ್ಞರ ಸಮಿತಿಯ ಮುಂದೆ ಮಂಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ನಿರ್ಣಯಿಸಲಾಗಿರುತ್ತದೆ.

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 166 ಜಿಪಅ 2015(2), ದಿನಾಂಕ: 04.08.2015ಕ್ಕೆ ಲಗತ್ತಿಸಿರುವ ಅನುಬಂಧ-3 ರನ್ವಯ ಒಟ್ಟಾರೆ 2683 ವಿವಿಧ ವೃಂದಗಳ ಹುದ್ದೆಗಳನ್ನು ಹಂಚಿಕೆ ಮಾಡಲಾಗಿದೆ. ಮೇಲೆ ಪ್ರಸ್ತಾಪಿಸಿರುವಂತೆ ಲೋಕೋಪಯೋಗಿ ಇಲಾಖೆಯ ವಿವಿಧ ವೃಂದಗಳ ಅಧಿಕಾರಿ/ನೌಕರರುಗಳಿಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಶಾಶ್ವತವಾಗಿ ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳ ನಿಯಮ 16(a)(ii) ರ ಅನುಸಾರ ವಿಲೀನಗೊಳ್ಳಲು ಅವಕಾಶ ಕಲ್ಪಿಸಬೇಕಾಗಿದ್ದಲ್ಲಿ ಹಾಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ಸೂಕ್ತ ತಿದ್ದುಪಡಿಯನ್ನು ಮಾಡಬೇಕಾಗಿರುತ್ತದೆ.

ಪ್ರಸ್ತುತ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ದಿನಾಂಕ: 24.05.2008 ರಂದು ರಚಿಸಿರುವ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆಯು ಇಲಾಖೆಯಲ್ಲಿ ಪರಿಶೀಲನೆಯಲ್ಲಿ ಇರುತ್ತದೆ. ಲೋಕೋಪಯೋಗಿ ಇಲಾಖೆ ಹಾಗೂ ಇತರೆ ಇಲಾಖೆಗಳ ಅಧಿಕಾರಿ/ನೌಕರರು ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವಿವಿಧ ವೃಂದಗಳ ಹುದ್ದೆಗಳಲ್ಲಿ ಶಾಶ್ವತವಾಗಿ ವಿಲೀನಗೊಳ್ಳಲು ಆಸಕ್ತಿ ಹೊಂದಿದಲ್ಲಿ ಅಂತಹ ಅಧಿಕಾರಿ/ನೌಕರರುಗಳಿಗೆ ಮತ್ತೊಂದು ಅವಕಾಶವನ್ನು ಕಲ್ಪಿಸುವ ದೃಷ್ಟಿಯಿಂದ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ಮಾಡುವುದನ್ನು ಬಾಕಿ ಇರಿಸಿ

ಕಾರ್ಯಕಾರಿ ಆದೇಶದ ಮೂಲಕ ಅವಕಾಶವನ್ನು ಕಲ್ಪಿಸಲು ತೀರ್ಮಾನಿಸಲಾಗಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 160 ಸೇಶಿಕಾ 2019(1), ಬೆಂಗಳೂರು ದಿನಾಂಕ:16.5.2020**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಗಾಗಿ ಸರ್ಕಾರವು ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ ವಿವಿಧ ವೃಂದಗಳ ಅಧಿಕಾರಿ/ನೌಕರರುಗಳನ್ನು ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ನಿಯಮ 16(ಎ) (ii) ರ ಅನುಸಾರ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ವ್ಯಾಪ್ತಿಯಲ್ಲಿನ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ಸೇವೆಯಲ್ಲಿ ಶಾಶ್ವತ ವರ್ಗಾವಣೆ ಮೂಲಕ ವಿಲೀನಗೊಳಿಸಲು ಒಂದು ಬಾರಿಗೆ ಮಾತ್ರ ಜಾರಿಗೆ ಬರುವಂತೆ ಹಾಗೂ ಮುಂದಿನ ಆದೇಶದವರೆಗೆ ಈ ಕಾರ್ಯಕಾರಿ ಆದೇಶವನ್ನು ಹೊರಡಿಸಲಾಗಿದೆ.

1. ಹೊಸದಾಗಿ ಶಾಶ್ವತವಾಗಿ ವರ್ಗಾವಣೆ ಮೂಲಕ ನೇಮಕಗೊಳ್ಳಲು ಇಚ್ಛಿಸುವ ಅಧಿಕಾರಿ/ನೌಕರರಿಗೆ ತಮ್ಮ ಅಭಿಮತ ಸಲ್ಲಿಸಲು ಒಂದು ಬಾರಿ ಅವಕಾಶ ಕಲ್ಪಿಸಿದೆ.
2. ಕಾರ್ಯಕಾರಿ ಆದೇಶವನ್ನು ಹೊರಡಿಸಿದ ನಂತರ ಈ ಕಾರ್ಯಕಾರಿ ಆದೇಶಕ್ಕಾನುಗುಣವಾಗಿ ಅನುಸರಿಸಬೇಕಾದ ಕಾರ್ಯವಿಧಾನದ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಪ್ರತ್ಯೇಕವಾಗಿ ಆದೇಶ ಹೊರಡಿಸಲಾಗುವುದು.
3. ಈ ಕಾರ್ಯಕಾರಿ ಆದೇಶವು ಕರ್ನಾಟಕ ಪಂಚಾಯತ್ ರಾಜ್ ಇಂಜಿನಿಯರಿಂಗ್ ಸೇವೆಗಳು (ವೃಂದ ಮತ್ತು ನೇಮಕಾತಿ) ನಿಯಮಗಳು ನಿಯಮ 2(2)ಕ್ಕೆ ಸೂಕ್ತ ತಿದ್ದುಪಡಿ ಮಾಡುವುದನ್ನು ಬಾಕಿ ಇರಿಸಿ ಅವಕಾಶ ಕಲ್ಪಿಸುವ ಷರತ್ತಿಗೊಳಪಟ್ಟಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಲ್.ಕೆ.ಅತೀಕ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್
ಇಲಾಖೆ.

**ಇವರಿಗೆ**

ಸಂಕಲನಕಾರರು ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ

**ಪ್ರತಿಯನ್ನು :-**

1. ಪ್ರಧಾನ ಮಹಾಲೇಖಪಾಲರು(ಸಾಮಾನ್ಯ ಮತ್ತು ಸಾಮಾಜಿಕ ವಲಯ, ಲೆಕ್ಕಪರಿಶೋಧನೆ)/ (ಆರ್ಥಿಕ ಮತ್ತು ರಾಜಸ್ವ ವಲಯ ಲೆಕ್ಕಪರಿಶೋಧನೆ)/(ಲೆಕ್ಕಗಳು ಮತ್ತು ಹಕ್ಕುಸ್ವಾಮ್ಯ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು–560001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಕಾರ್ಯದರ್ಶಿ ಲೋಕೋಪಯೋಗಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ನಗಾರಭಿವೃದ್ಧಿ ಇಲಾಖೆ.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಮೂಲ ಸೌಲಭ್ಯ ಅಭಿವೃದ್ಧಿ ಇಲಾಖೆ.

5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಾನೂನು ಇಲಾಖೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಆಯುಕ್ತರು, ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿ, ಸಣ್ಣ ನೀರಾವರಿ ಇಲಾಖೆ,
10. ಆಯುಕ್ತರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ ಬೆಂಗಳೂರು.
11. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
12. ಮುಖ್ಯ ಇಂಜಿನಿಯರ್, ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ, ಆನಂದ್ ರಾವ್ ವೃತ್ತ, ಬೆಂಗಳೂರು.
13. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರ್ ಇಲಾಖೆ, ಬೆಂಗಳೂರು.
14. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು.
15. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.
16. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡ(ದಕ್ಷಿಣ), ಬೆಂಗಳೂರು/(ಉತ್ತರ) ಧಾರವಾಡ/(ಈಶಾನ್ಯ) ಕಲಬುರಗಿ.
17. ಎಲ್ಲಾ ಮುಖ್ಯ ಇಂಜಿನಿಯರುಗಳು, ಜಲಸಂಪನ್ಮೂಲ ಇಲಾಖೆ
18. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
19. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಕರ್ನಾಟಕ ಸರ್ಕಾರ ಸಚಿವಾಲಯ, ಬಹುಮಹಡಿಕಟ್ಟಡ, ಬೆಂಗಳೂರು.
20. ಸರ್ಕಾರದ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ, ವಿಧಾನಸೌಧ, ಬೆಂಗಳೂರು.
21. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
22. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ (ಸಚಿವ ಸಂಪುಟ)
23. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
24. ಎಲ್ಲಾ ಅಧೀಕ್ಷಕ ಅಭಿಯಂತರರುಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ./ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತಗಳು.
25. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿ.